ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಗೌರಿಬಿದನೂರು ತಾಲ್ಲೂಕಿನಾದ್ಯಂತ ರೆವಿನ್ಯೂ ನಿವೇಶನದಲ್ಲಿ ಆಶ್ರಯ ಮನೆಗಳ ನಿರ್ಮಾಣ

2061(2182) ಶ್ರೀ ಶಿವಶಂಕರರೆಡ್ಡಿ ಎನ್.ಹೆಚ್. (ಗೌರಿಬಿದನೂರು) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗೌರಿಬಿದನೂರು ತಾಲ್ಲೂಕಿನಾದ್ಯಂತ ಆಶ್ರಯ ಯೋಜನೆಯ ವತಿಯಿಂದ ಮನೆ ನಿರ್ಮಿಸಿಕೊಳ್ಳಲು ಅನುದಾನ ಮಂಜೂರು ಮಾಡಿಸಿಕೊಂಡು ರೆವಿನ್ಯೂ ನಿವೇಶನದಲ್ಲಿ ಮನೆ ನಿರ್ಮಾಣ ಮಾಡಿಕೊಂಡಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ಗ್ರಾಮವಾರು ವಿವರ ಒದಗಿಸುವುದು);

ಆ) ಹಾಗಿದ್ದರೆ, ರೆವಿನ್ಯೂ ನಿವೇಶನದಲ್ಲಿ ಆಶ್ರಯ, ಅಂಬೇಡ್ಕರ್, ಇಂದಿರಾ ಆವಾಸ್ ಯೋಜನೆಯ ಅನುದಾನವನ್ನು ಫಲಾನುಭವಿಗಳಿಗೆ ಮಂಜೂರು ಮಾಡಬಹುದೆ;

ಇ) ರೆವಿನ್ಯೂ ಗ್ರಾಮಠಾಣಾ ನಿವೇಶನ ಹೊಂದಿರುವ ಫಲಾನುಭವಿಗಳಿಗೂ ಸಹ ಆಶ್ರಯ ಯೋಜನೆಯಡಿಯಲ್ಲಿ ಅನುದಾನ ಬಿಡುಗಡೆ ಮಾಡಿ ಮನೆ ನಿರ್ಮಾಣ ಮಾಡಿಕೊಳ್ಳಲು ಅನುಮತಿಯನ್ನು ಒದಗಿಸಿಕೊಟ್ಟು ಈ ಭಾಗದ ನಿರ್ಗತಿಕರಿಗೆ ಮನೆ ನಿರ್ಮಿಸಿಕೊಳ್ಳಲು ಅನುಮತಿ ಒದಗಿಸಬಹುದೇ?

ಶ್ರೀ ಸಿ.ಆರ್. ಸಗೀರ್ ಅಹಮದ್ (ವಸತಿ ಸಚಿವರು):

ಅ) ಗ್ರಾಮೀಣ ಪ್ರದೇಶ : ಯಾರೂ ಇಲ್ಲ

ನಗರ ಪ್ರದೇಶ : 9 ಫಲಾನುಭವಿಗಳು

ಆ) ಮತ್ತು ಇ) ಕಾನೂನು ಪ್ರಕಾರ ಪಡೆದಿರುವ ಮನೆ ನಿವೇಶನವಿರುವ ಬಡವರಿಗೆ ಆಶ್ರಯ ವಸತಿ ಯೋಜನೆಯ ನಿಯಮಗಳಡಿಯಲ್ಲಿ ಅರ್ಹರಿದ್ದಲ್ಲಿ ಮನೆ ನೀಡಬಹುದು.

ಗೌರಿಬಿದನೂರು ತಾಲ್ಲೂಕಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾರಂಭ

2062(2553) ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ (ಗೌರಿ ಬಿದನೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ 16 ಪ್ರೌಢ ಶಾಲೆಗಳು (ಸರ್ಕಾರಿ) 15 ಖಾಸಗಿ ಪ್ರೌಢ ಶಾಲೆಗಳು ಇದ್ದು, ಈ ಪ್ರೌಢ ಶಾಲೆಗಳಲ್ಲಿ ಉತ್ತೀರ್ಣರಾದ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಮುಂದಿನ ವ್ಯಾಸಂಗಕ್ಕೆ 15-18 ಕಿ.ಮೀ ದೂರಹೋಗಿ ವ್ಯಾಸಂಗ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಗೌರಿಬಿದನೂರು ತಾಲ್ಲೂಕಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯವು ಇಲ್ಲದೆ ಇಲ್ಲಿನ ವಿದ್ಯಾರ್ಥಿನಿಯರು, ವಿದ್ಯಾರ್ಥಿಗಳು ಸರ್ಕಾರವನ್ನು ದೂಷಿಸುತ್ತಿರುವುದು ನಿಜವಲ್ಲವೇ;

ಇ) ಹಾಗಿದ್ದರೆ ಗೌರಿಬಿದನೂರು ತಾಲ್ಲೂಕಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ ಸ್ಥಾಪನೆ ಮಾಡುವ ಪ್ರಸ್ತಾಪವು ಸರ್ಕಾರದ ಮುಂದಿದೆಯೇ; ಇದಕ್ಕೆ ತಗಲುವ ವೆಚ್ಚವೇನು?

ಈ) ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯವನ್ನು ಸ್ಥಾಪನೆ ಮಾಡಿ ಈ ಹಿಂದುಳಿದ ಭಾಗದ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಮುಂದಿನ ಉತ್ತಮ ವ್ಯಾಸಂಗಕ್ಕೆ ಅನುಕೂಲ ಕಲ್ಪಿಸಿಕೊಡುವುದು ಯಾವಾಗ?

ಪೊ॥ ಬಿ.ಕೆ. ಚಂದ್ರಶೇಖರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಇಲ್ಲ. ಗೌರಿಬಿದನೂರು ತಾಲ್ಲೂಕಿನಲ್ಲಿ 9 ಪದವಿ ಪೂರ್ವ ಕಾಲೇಜುಗಳಿದ್ದು, ಪದವಿ ಪೂರ್ವ ಶಿಕ್ಷಣಕ್ಕೆ ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಗೆ ಅನಾನುಕೂಲವಾಗಿಲ್ಲ. ಈ ಬಗ್ಗೆ ಯಾವುದೇ ಬೇಡಿಕೆ ಇರುವುದಿಲ್ಲ.

ಆ) ಇಲ್ಲ, ಇಲ್ಲಿ ಈಗಾಗಲೇ ಒಂದು ಖಾಸಗಿ ಅನುದಾನಿತ ಪದವಿ ಕಾಲೇಜು ಇದೆ.

ಇ) ಬಿ.ಎ., ಬಿ.ಎಸ್.ಸಿ., ಮತ್ತು ಬಿ.ಕಾಂ., ಕೋರ್ಸುಗಳೊಂದಿಗೆ ಸರ್ಕಾರಿ ಪದವಿ ಕಾಲೇಜನ್ನು ಸ್ಥಾಪಿಸಲು ವಾರ್ಷಿಕವಾಗಿ ಸುಮಾರು 35.67 ಲಕ್ಷ ರೂ.ಗಳ ವೆಚ್ಚವನ್ನು ಅಂದಾಜಿಸಲಾಗಿದೆ.

ಗೌರಿಬಿದನೂರಿನ ಸರ್ಕಾರಿ ಪದವಿ ಕಾಲೇಜಿನ ಸ್ಥಾಪನೆಯ ಸೂಕ್ತತೆಯ ಬಗ್ಗೆ ಪರಿಶೀಲಿಸಲಾಗುತ್ತಿದೆ.

ರಾಜ್ಯದಲ್ಲಿರುವ ಗ್ರಾಮಪಂಚಾಯ್ತಿ ಗ್ರಂಥಾಲಯ ಮೇಲ್ವಿಚಾರಕರಿಗೆ ನೀಡುತ್ತಿರುವ ವೇತನ

2063(1897) ಶ್ರೀ ಸುರೇಶ್ ಕುಮಾರ್. ಎಸ್. (ರಾಜಾಜಿನಗರ) : ಮಾನ್ಯ ವಯಸ್ಕರ ಶಿಕ್ಷಣ, ಗ್ರಂಥಾಲಯಗಳು ಮತ್ತು ಮುದ್ರಣ ಹಾಗೂ ಲೇಖನ ಸಾಮಗ್ರಿಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿರುವ ಗ್ರಾಮ ಪಂಚಾಯ್ತಿ ಗ್ರಂಥಾಲಯ ಮೇಲ್ವಿಚಾರಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು);

ಆ) ಅವರಿಗೆ ನೀಡುತ್ತಿರುವ ವೇತನ ಎಷ್ಟು; ಈ ವೇತನವನ್ನು ಯಾವ ವರ್ಷದಿಂದ ನೀಡಲಾಗುತ್ತಿದೆ;

ಇ) ಈ ಹುದ್ದೆಗಳನ್ನು ಸೃಷ್ಟಿಸಿದ ವರ್ಷ ಯಾವುದು; ಪ್ರಾರಂಭದಲ್ಲಿ ಇವರುಗಳಿಗೆ ನೀಡಲಾಗುತ್ತಿರುವ ವೇತನ ಎಷ್ಟು;

ಈ) ಇವರುಗಳಿಗೆ ವೇತನ ಹೆಚ್ಚಳ ಮಾಡುವ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಬಾಬುರಾವ್ ಚಿವ್ವಾಣ (ವಯಸ್ಕರ ಶಿಕ್ಷಣ, ಗ್ರಂಥಾಲಯಗಳು ಮತ್ತು ಮುದ್ರಣ ಹಾಗೂ ಲೇಖನ ಸಾಮಗ್ರಿಗಳ ರಾಜ್ಯ ಸಚಿವರು):

ಅ) 2751. (ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ಲಗತ್ತಿಸಿದೆ).

ಆ) ಮಾಸಿಕ ಗೌರವ ಸಂಭಾವನೆ ರೂ. 750.00. ಈ ವೇತನವನ್ನು 01 / 01 / 1999 ರಿಂದ ನೀಡಲಾಗುತ್ತಿದೆ.

ಇ) 1987-88ನೇ ಸಾಲಿನಲ್ಲಿ ಗೌರವ ಸಂಭಾವನೆ ಆಧಾರದ ಮೇಲೆ ಮೇಲ್ವಿಚಾರಕ ಹುದ್ದೆಗಳನ್ನು ಸೃಷ್ಟಿಸಿದೆ. ಪ್ರಾರಂಭದಲ್ಲಿ ನೀಡಲಾಗುತ್ತಿದ್ದ ಮಾಸಿಕ ಗೌರವ ಸಂಭಾವನೆ ರೂ. 300.00.

ಈ) ಸರ್ಕಾರದ ಪರಿಶೀಲನೆಯಲ್ಲಿದೆ.